**ಕರ್ನಾಟಕ ಸರ್ಕಾರ**

ಸಂಖ್ಯೆ: AGRI-AGS/178/2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: **05.01.2023.**

**ಇವರಿಂದ:**
ಸರ್ಕಾರದ ಕಾರ್ಯದರ್ಶಿ,
ಕೃಷಿ ಇಲಾಖೆ, ಬೆಂಗಳೂರು-01.

**ಜರೂರು**

**ಇವರಿಗೆ:**
ಆಯುಕ್ತರು, ಕೃಷಿ ಇಲಾಖೆ,
ಶೇಷಾದ್ರಿ ರಸ್ತೆ, ಬೆಂಗಳೂರು.

ಮಾನ್ಯರೆ,

**ವಿಷಯ:** ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು.

**ಉಲ್ಲೇಖ:**
1. ಪತ್ರ ಸಂಖ್ಯೆ: ಸಿ-1/ಸ.ಕೃ.ಅ-/ವಿ.ವ-06/2018-19 ದಿನಾಂಕ: 24.05.2022
2. ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು 2021 ದಿನಾಂಕ: 15.05.2021 ಮತ್ತು ದಿನಾಂಕ: 02.12.2022
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 01 ಸೆಹಿಮ 2022 ದಿನಾಂಕ: 28.12.2022
4. ತಮ್ಮ ಪತ್ರ ಸಂಖ್ಯೆ: ಸಿಬ್ಬಂದಿ-2/ ಅ ಮತ್ತು ಶೀಲಿ/ಬ್ಯಾ.ಲಾ/53/2021-22 ದಿನಾಂಕ: 13.10.2022

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು ಉಲ್ಲೇಖಿತ (1) ಪತ್ರದೊಂದಿಗೆ ಸಲ್ಲಿಸಲಾಗಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ಈ ಕೆಳಕಂಡಂತೆ ಕ್ರಮವಹಿಸಿ 300 ಸಹಾಯಕ ಕೃಷಿ ಅಧಿಕಾರಿಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಅಗತ್ಯ ಕ್ರಮವಹಿಸುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

1. ಕರ್ನಾಟಕ ಕೃಷಿ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು, 2021 ದಿನಾಂಕ: 15.05.2021 ಮತ್ತು ದಿನಾಂಕ: 02.12.2022 ರನ್ವಯ ಖಾಲಿಯಿರುವ ಸಹಾಯಕ ಕೃಷಿ ಅಧಿಕಾರಿಗಳ ಹುದ್ದೆಗಳ ಪೈಕಿ 300 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ನೇರ ನೇಮಕಾತಿ ನಿಯಮಗಳಲ್ಲಿ ಅಧಿಸೂಚಿಸಿರುವಂತೆ **ಕೇವಲ ಸ್ಪರ್ಧಾತ್ಮಕ ಪರೀಕ್ಷೆಯ ಆಯ್ಕೆ ವಿಧಾನ ಅನುಸರಿಸಿ ಭರ್ತಿ ಮಾಡಿಕೊಳ್ಳುವುದು.**

..2



2. ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಭಾರತ ಸಂವಿಧಾನದ ಅನುಚ್ಛೇದ 16(4)ರ ಅನ್ವಯ ಮೀಸಲಾತಿ ಕಲ್ಪಿಸುವ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಹೊರಡಿಸಿರುವ ಆದೇಶ ಸಂಖ್ಯೆ: ಸಿಆಸುಇ 01 ಸೆಹಿಮ 2022 ದಿನಾಂಕ: 28.12.2022ರನ್ವಯ ಪರಿಶೀಲಿಸಿ ಕ್ರಮವಹಿಸುವುದು.
3. ಉಲ್ಲೇಖಿತ (4) ರ ತಮ್ಮ ಪತ್ರದಲ್ಲಿ (ಪ್ರತಿ ಲಗತ್ತಿಸಿದೆ) ಸಹಾಯಕ ಕೃಷಿ ಅಧಿಕಾರಿಗಳ ವೃಂದದಲ್ಲಿ ಬ್ಯಾಕ್ ಲಾಗ್ ಹುದ್ದೆಗಳು ಇರುವುದಾಗಿ ತಿಳಿಸಿದ್ದು, ಸದರಿ ಹುದ್ದೆಗಳನ್ನು ಸಹ ನಿಯಮಾನುಸಾರ ಪರಿಶೀಲಿಸಿ, ಭರ್ತಿ ಮಾಡಿಕೊಳ್ಳಲು ಅಗತ್ಯ ಕ್ರಮವಹಿಸುವುದು.
4. ಕರ್ನಾಟಕ ಸರ್ಕಾರಿ ಸಾಮಾನ್ಯ ನೇಮಕಾತಿ ನಿಯಮಗಳು, 1977 ರನ್ವಯ ಪರಿಶೀಲಿಸಿ ನೇಮಕಾತಿ ಮಾಡಲು ಅಗತ್ಯ ಕ್ರಮವಹಿಸುವುದು..

ತಮ್ಮ ನಂಬುಗೆಯ,

05/01/2023

**ಕರ್ನಾಟಕ ಸರ್ಕಾರ**

ಸಂಖ್ಯೆ: AGRI-AGS/178/2021

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: .**18.05.2022**

**ಇವರಿಂದ**:
ಸರ್ಕಾರದ ಕಾರ್ಯದರ್ಶಿ
ಕೃಷಿಇಲಾಖೆ, ಬೆಂಗಳೂರು-01

**ಜರೂರು**

**ಇವರಿಗೆ:**
ಆಯುಕ್ತರು, ಕೃಷಿ ಇಲಾಖೆ,
ಶೇಷಾದ್ರಿ ರಸ್ತೆ, ಬೆಂಗಳೂರು.

ಮಾನ್ಯರೆ,

**ವಿಷಯ:** ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು

**ಉಲ್ಲೇಖ:** 1. ಏಕ ಕಡತ ಸಂಖ್ಯೆ: ಸಿ-1/ಸಕೃಅ/31/2021-22
2. ತಮ್ಮ ಪತ್ರ ಸಂಖ್ಯೆ: ಸಿ-01/ಸಕೃಅ-ವಿವ-41/2021-22 ದಿನಾಂಕ: 06.11.2021

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೃಷಿ ಇಲಾಖೆಯಲ್ಲಿ ಖಾಲಿಯಿರುವ ಸಹಾಯಕ ಕೃಷಿ ಅಧಿಕಾರಿಗಳ ಹುದ್ದೆಗಳ ಪೈಕಿ **300 ಹುದ್ದೆಗಳನ್ನು (ಮೂರು ನೂರು)** ನಿಯಮಾನುಸಾರ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 407 ವೆಚ್ಚ-4/2021, ದಿನಾಂಕ: 13.05.2022 ರನ್ವಯ ಸಹಮತಿ ನೀಡಲಾಗಿರುತ್ತದೆ. ಅದರಂತೆ, ಸಹಾಯಕ ಕೃಷಿ ಅಧಿಕಾರಿಗಳ (ರೂ.40,900-78,200) 300 ಹುದ್ದೆಗಳನ್ನು ಕರ್ನಾಟಕ ಕೃಷಿ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು, 2021 ರಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆಯ ಅಭ್ಯರ್ಥಿಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ನಿಯಮಾನುಸಾರ ಕೂಡಲೇ ಅಗತ್ಯ ಕ್ರಮಕೈಗೊಳ್ಳುವಂತೆ ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

18/05/2022

**(ಜೋನ್ ಪ್ರಕಾಶ್ ರೋಡ್ರಿಗಸ್)**
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಸೇವೆಗಳು)

# 300 ಸಹಾಯಕ ಕೃಷಿ ಅಧಿಕಾರಿ ಹುದ್ದೆ ನೇಮಕಕ್ಕೆ ಅಸ್ತು

**ಬೆಂಗಳೂರು:** ವಿವಿಧ ಕಡೆ ಖಾಲಿ ಇರುವ 300 ಸಹಾಯಕ ಕೃಷಿ ಅಧಿಕಾರಿ ಹುದ್ದೆಯನ್ನು ನಿಯಮಾನುಸಾರ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆರ್ಥಿಕ ಇಲಾಖೆ ಒಪ್ಪಿಗೆ ನೀಡಿದೆ. ಖಾಲಿ ಇರುವ ಸಹಾಯಕ ಕೃಷಿ ಅಧಿಕಾರಿಗಳ ಹುದ್ದೆಗಳ ಭರ್ತಿಗೆ ಸಲ್ಲಿಸಿದ್ದ ಪ್ರಸ್ತಾವನೆಗೆ ಆರ್ಥಿಕ ಇಲಾಖೆ ಒಪ್ಪಿಗೆ ನೀಡಿದೆ ಎಂದು ಕೃಷಿ ಸಚಿವ ಬಿ.ಸಿ.ಪಾಟೀಲ್ ತಿಳಿಸಿದ್ದಾರೆ. 300 ಹುದ್ದೆಯನ್ನು 2021 ರ ಕರ್ನಾಟಕ ಕೃಷಿ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆಯ ಅಭ್ಯರ್ಥಿಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗುವುದು. ಶೇ.85 ರಷ್ಟು ಕೃಷಿ ಪದವೀಧರರು ಮತ್ತು ಉಳಿದ ಶೇ.15 ರಷ್ಟು ಹುದ್ದೆಗೆ ಬಿ.ಟೆಕ್ ಕೃಷಿ ಎಂಜಿನಿಯರಿಂಗ್ ಅಥವಾ ಬಯೋಟೆಕ್ನಾಲಜಿ ಪದವೀಧರರು ಅರ್ಹರಿರುತ್ತಾರೆ ಎಂದು ತಿಳಿಸಿದ್ದಾರೆ.



ಕನ್ನಡಪ್ರಭ Thu, 19 May 2022
https://kpepaper.asianetnev